**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ**

**ಸಿ ಸಿ ಸಂಖ್ಯೆ: 130/2023**

**ಆಪಾದನೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

ಮಹೇಂದ್ರ ಬಿ ಎಸ್ ಬಿನ್ ಲೇ ಸಿದ್ದರಾಜು
26 ವರ್ಷ, ವಾಸಃ ಬಿಳಿಗೆರೆ ಗ್ರಾಮ,
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ಆಪಾದನೆ ಏನೆಂದರೆ–

ದಿನಾಂಕ 04.02.2023 ರಂದು ರಾತ್ರಿ 8.00 ಗಂಟೆ ಸಮಯದಲ್ಲಿ ತಿ. ನರಸೀಪುರ ಪೊಲೀಸ್ ಠಾಣಾ ಸರಹದ್ದಿನ, ತಿ. ನರಸೀಪುರ ತಾಲ್ಲೂಕಿನ ಬನ್ನಹಳ್ಳಿ – ಹೆಳವರಹುಂಡಿ ಗ್ರಾಮಗಳ ನಡುವೆ ಇರುವ ಶ್ರೀ ಶಂಭುಲಿಂಗೇಶ್ವರ ಹಾರ್ಡವೇರ್ ಅಂಗಡಿ ಹತ್ತಿರ ಇರುವ ಲಲಿತಮ್ಮ ಹಾಗೂ ಮಲ್ಲೇಶ ರವರ ಜಮೀನಿನ ನಡುವೆ ಹಾದು ಹೋಗುವ ನಂಜನಗೂಡು – ತಿ. ನರಸೀಪುರ ಮುಖ್ಯ ರಸ್ತೆಯ ಎಡಭಾಗದಲ್ಲಿ ಕೂಸಣ್ಣ ರವರು ನಡೆದುಕೊಂಡು ಹೋಗುತ್ತಿದ್ದಾಗ, ಆರೋಪಿಯಾದ ನೀವು ಚಾಲನೆ ಮಾಡಲು ಚಾಲನೆ ಪರವಾನಗೆ ಇಲ್ಲದೆ ಮತ್ತು ವಿಮೆ ಚಾಲ್ತಿಯಲ್ಲಿರದ ಮೋಟಾರ್ ಸೈಕಲ್ ಸಂಖ್ಯೆ ಕೆಎ–09–ಹೆಚ್‌ಡಿ–7243ನ್ನು ಅತಿ ವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿ ಸದರಿ ಕೂಸಣ್ಣ ರವರಿಗೆ ಢಿಕ್ಕಿ ಪಡಿಸಿ ತೀವ್ರ ಸ್ವರೂಪದ ಗಾಯಪಡಿಸಿ ಅವರ ಮರಣ ಉಂಟು ಮಾಡಿದ್ದು, ನಂತರ ಗಾಯಾಳುವನ್ನು

ಸುಧಾರಿಸದೇ ಮತ್ತು ಅಪಘಾತವಾದ ಬಗ್ಗೆ ಪೋಲಿಸರಿಗೆ ಮಾಹಿತಿ ತಿಳಿಸದೆ ಸ್ಥಳದಿಂದ ಮೋಟಾರ್ ಸೈಕಲ್‌ನ್ನು ತೆಗೆದು ಕೊಂಡು ಹೋಗುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ. 279, 304-ಎ ಮತ್ತು ಭಾರತೀಯ ಮೋಟಾರು ವಾಹನ ಕಾಯ್ದೆ ಕಲ 181, 187 ಮತ್ತು 196 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು.

ಪ್ರಶ್ನೆಃ ನೀವು ಸದರಿ ಆಪಾದನೆಯನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ಆಪಾದನೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 29.11.2025.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ.ನರಸೀಪುರ.